## 42. ಶಾಸಕರ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ.ಸೊಪ್ಪಿನಕೇರಿ ಶಿಕಾರಿಪುರ

ಇತ್ತೀಚಿನ ದಿನಗಳಲ್ಲಿ ಪೋಷಕರು ಖಾಸಗಿ ಶಾಲೆಗಳತ್ತ ಮುಖ ಮಾಡುತ್ತಿರುವುದು, ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಿ ಮುಚ್ಚುವ ಭೀತಿಯಲ್ಲಿರುವ ವಿಚಾರಗಳು ಸಾರ್ವಜನಿಕವಾಗಿ ಹಾಗೂ ಮಾಧ್ಯಮಗಳಲ್ಲಿ ಬಹು ಚರ್ಚಿತ ವಿಷಯವಾಗಿದೆ. ಆದರೆ ಸರ್ಕಾರಿ ಶಾಲೆಗಳೂ ಸಹ ಯಾವುದೇ ಖಾಸಗಿ ಶಾಲೆಗಳಿಗೆ ಕಡಿಮೆಯಿಲ್ಲ ಎಂಬುದನ್ನು ನಿರೂಪಿಸುವಂತೆ **ಶಿವಮೊಗ್ಗ ಜಿಲ್ಲೆಯ ಶಿಕಾರಿಪುರದ ಸೊಪ್ಪಿನಕೇರಿಯ ತಾಲ್ಲೂಕು ಮಟ್ಟದ ಶಾಸಕರ ಸರ್ಕಾರಿ ಮಾದರಿ ಶಾಲೆಯು** 2015–16 ನೇ ಸಾಲಿನಿಂದ ವಿಶಿಷ್ಟ ರೀತಿಯಲ್ಲಿ ದಾಖಲಾತಿಯನ್ನು ಆರಂಭಿಸಿದೆ. ಇಲ್ಲಿನ ಮುಖ್ಯೋಪಾಧ್ಯಾಯರಾದ ಶ್ರೀ ವಸಂತ ಕುಮಾರ ಕೆ.ಸಿ. ಮತ್ತು ಸಹಶಿಕ್ಷಕರ ದೂರ ದೃಷ್ಟಿಯ ಕಾರ್ಯಕ್ರಮಗಳು ಕಳೆದ ಎರಡು ವರ್ಷಗಳಿಂದ ಶಾಲೆಯ ಶೈಕ್ಷಣಿಕ ಹಾಗೂ ಭೌತಿಕ ಪರಿಸರಗಳು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾಗಿವೆ.

ಕಳೆದ ಸಾಲಿನಿಂದ **ವಿಶಿಷ್ಟ ಕರಪತ್ರ**ಗಳ ಮೂಲಕ ಶಾಲೆಯ ವಿಶೇಷತೆಗಳು ಹಾಗೂ ಶಾಲೆಯಲ್ಲಿ ಸಿಗುವ ಸೌಲಭ್ಯಗಳ ಬಗ್ಗೆ ಶಾಲಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಹಶಿಕ್ಷಕರೊಡಗೂಡಿ ಮನೆ–ಮನೆ ಪ್ರಚಾರ ಕೈಗೊಂಡು ದಾಖಲಾತಿಯನ್ನು ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ತಾಲ್ಲೂಕಿನಲ್ಲಿಯೇ ಈ ಶಾಲೆಯನ್ನು ಮಾದರಿ ಶಾಲೆಯನ್ನಾಗಿ ಮಾಡುವ ನಿಟ್ಟಿನಲ್ಲಿ ಹತ್ತು ಹಲವಾರು ಕಾರ್ಯಕ್ರಮಗಳನ್ನು ಕೈಗೊಂಡಿದ್ದಾರೆ.ಇಲ್ಲಿನ ಮಕ್ಕಳಿಗೆ ಉತ್ತಮ ಕಲಿಕಾ ವಾತರಣ ನಿರ್ಮಾಣ ಮಾಡಿದ್ದಾರೆ. ಪೋಷಕರ ಇಂಗ್ಲೀಷ್ ವ್ಯಾಮೋಹಕ್ಕೆ ಸ್ಪಂದಿಸುವ ನಿಟ್ಟಿನಲ್ಲಿ ಮಕ್ಕಳಿಗೆ **ಸ್ಪೋಕನ್ ಇಂಗ್ಲೀಷ್** ತರಗತಿಗಳನ್ನು ಸ್ವತಃ ಶಿಕ್ಷಕರೇ ನಡೆಸಿಕೊಂಡು ಬರುತ್ತಿದ್ದಾರೆ. ಶಾಲೆಯಲ್ಲಿ ನಿರಂತರ ಕಂಪ್ಯೂಟರ್ ಕಲಿಕೆ ಜಾರಿಯಲ್ಲಿದ್ದು, ಪ್ರತ್ಯೇಕ ಗ್ರಂಥಾಲಯ, ಪ್ರತ್ಯೇಕ ವಿಜ್ಞಾನ ಪ್ರಯೋಗಾಲಯ, ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ಪರಿಹಾರ ಬೋಧನಾ ತರಗತಿಗಳು ಹಾಗೂ ಪ್ರತಿ ತಿಂಗಳ ಎರಡನೇ ಹಾಗೂ ನಾಲ್ಕನೇ ಶನಿವಾರ "NO Bag Day" ದಿನದಂದು ಸ್ಥಳಿಯ ಪ್ರತಿಭಾನ್ವಿತ ವ್ಯಕ್ತಿಗಳಿಂದ ಮಕ್ಕಳಿಗೆ ಸಂಗೀತ, ನೃತ್ಯ, ಭಾಷಾ ಆಟಗಳು, ಯೋಗ–ಧ್ಯಾನ, ಪ್ರಾಣಾಯಾಮ, ಪೇಪರ್ ಕ್ರಾಫ್ಟ್, ಐಸ್‌ಕ್ರೀಮ್ ಸ್ಟಿಕ್ ಆರ್ಟ ಮುಂತಾದ ಕಲೆಗಳನ್ನು ಪರಿಚಯಿಸಲಾಗುತ್ತಿದೆ.

ಇದರೊಂದಿಗೆ ಮಕ್ಕಳಲ್ಲಿ ಹುದುಗಿರುವ ಪ್ರತಿಭೆಯನ್ನು ಗುರುತಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಈ ಸಾಲಿನಲ್ಲಿ ವಿಶೇಷವಾಗಿ **"ತಂತ್ರಜ್ಞಾನ ಆಧಾರಿತ ಕಲಿಕೆಯೆಡೆಗೆ ನಮ್ಮ ನಡಿಗೆ"** ಎಂಬ ಧ್ಯೇಯ ವಾಕ್ಯದೊಂದಿಗೆ ದಾನಿಗಳಿಂದ ಪ್ರೊಜೆಕ್ಟರ್‌ನ್ನು ಖರೀದಿಸಿ ಸರ್ಕಾರಿ ಶಾಲೆಗಳಲ್ಲಿ "ಸ್ಮಾರ್ಟ ಕ್ಲಾಸ್" ತರಗತಿಗಳನ್ನು ಜಾರಿಗೆ ತರಲಾಗಿದೆ. ಪ್ರತಿ ವರ್ಷದ ಆರಂಭದಲ್ಲಿ ದಾನಿಗಳ ಸಹಾಯದಿಂದ ಶಾಲೆಯ ಎಲ್ಲಾ ಮಕ್ಕಳಿಗೆ ಉಚಿತವಾಗಿ ನೋಟ್‌ಬುಕ್ ಮತ್ತು ಲೇಖನ ಸಾಮಗ್ರಿಗಳನ್ನು ವಿತರಿಸಲಾಗುತ್ತಿದೆ. ಕಳೆದ ಮೂರು ಬೇಸಿಗೆ ರಜೆ ಅವಧಿಗಳಲ್ಲಿ ಜೆಸೀಸ್ ಚಂದನ, ಶಿಕಾರಿಪುರ ಇವರ ಸಂಯುಕ್ತ ಆಶ್ರಯದಲ್ಲಿ ಶಾಲಾ ಮಕ್ಕಳಿಗೆ, ಹತ್ತು ದಿನಗಳ ಕಾಲ **ಉಚಿತ ಬೇಸಿಗೆ ಶಿಬಿರವ**ನ್ನು ಆಯೋಜಿಸಿ ಯಶಸ್ವಿಯಾಗಿದ್ದಾರೆ. ದಾನಿಗಳ ಸಹಕಾರದಿಂದ ಶಾಲೆಯ ಎಲ್ಲಾ ಮಕ್ಕಳಿಗೆ ಉಚಿತ "ಶಾಲಾ ಡೈರಿ" ವ್ಯವಸ್ಥೆ ಮಾಡಿದ್ದು, ಪೋಷಕರಿಗೆ ತಮ್ಮ ಮಕ್ಕಳ ಕಲಿಕೆಯ ಬಗ್ಗೆ ಮಾಹಿತಿ ನೀಡುತ್ತಿದ್ದಾರೆ. ದಾನಿಗಳ ನೆರವಿನಿಂದ ಶಾಲಾ ಮಕ್ಕಳಿಗೆ ಪ್ರತಿದಿನ ಉಚಿತವಾಗಿ ಸಂಜೆ 6:00 ರಿಂದ 08:30ರ ವರೆಗೆ ಶಾಲೆಯಲ್ಲಿಯೇ ಎರಡು ಟ್ಯೂಷನ್ ತರಗತಿಗಳನ್ನು ನಡೆಸಿಕೊಂಡು ಬರಲಾಗುತ್ತಿದೆ. ಶಾಲೆಯಲ್ಲಿ ಪ್ರತಿದಿನ ಸಂಜೆ 5:00 ರಿಂದ ರಿಯಾಯ್ತಿ ದರದಲ್ಲಿ, ಮಕ್ಕಳಿಗೆ ಸಂಪನ್ಮೂಲ ಶಿಕ್ಷಕರಿಂದ ನವೋದಯ, ಮುರಾರ್ಜಿ ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆ.

ಶಾಲೆಯ ಹಳೆಯ ವಿದ್ಯಾರ್ಥಿಗಳ ಸಹಕಾರದಿಂದ ಶಾಲೆಗೆ ಉಚಿತವಾಗಿ ಮೈಕ್‌ಸೆಟ್‌ನ್ನು ಕೊಡುಗೆಯಾಗಿ ಪಡೆಯಲಾಗಿದೆ. ಶಾಲೆಯಲ್ಲಿ ಬಡ ಮಕ್ಕಳ ಕಲ್ಯಾಣ ನಿಧಿಯನ್ನು ಸ್ಥಾಪಿಸಿದ್ದು, ಬಡ ಮಕ್ಕಳಿಗೆ ಅಗತ್ಯವಿರುವ ಮತ್ತು ಶಾಲಾಭಿವೃದ್ಧಿಗಾಗಿ ಈ ಹಣವನ್ನು ಬಳಸಲಾಗುತ್ತಿದೆ. ಸ್ಥಳೀಯ ದಾನಿಗಳಿಂದ ಸುಮಾರು 3ಲಕ್ಷ ರೂಗಳ ದೇಣಿಗೆಯನ್ನು ವಸ್ತುಗಳ ರೂಪದಲ್ಲಿ ಸಂಗ್ರಹಿಸಲಾಗಿದೆ. ಇದಲ್ಲದೆ ಸ್ಥಳೀಯ ಶಾಸಕರಾದ ಶ್ರೀ ಬಿ.ವೈ ರಾಘವೇಂದ್ರರವರ ಶಾಸಕರ ಅನುದಾನದಲ್ಲಿ ಸುಮಾರು 20ಲಕ್ಷ ರೂಗಳ 03 ಹೊಸ ಕೊಠಡಿಗಳು ಮತ್ತು ಪುರಸಭಾ ಸದಸ್ಯರಾದ ಶ್ರೀಮತಿ ಶಬಾನಾಬಾನು ಮಹ್ಮದ್‌ಸಾಧಿಕ್‌ರವರ ಅನುದಾನದಿಂದ ಸುಮಾರು 12ಲಕ್ಷರೂಗಳ ಹೈಟೆಕ್ ಶೌಚಾಲಯವನ್ನು ನಿರ್ಮಿಸಿಕೊಟ್ಟಿರುತ್ತಾರೆ.

ಇದರೊಂದಿಗೆ ಉಚಿತ ಶಿಕ್ಷಣದೊಂದಿಗೆ ಗುಣಾತ್ಮಕ ಶಿಕ್ಷಣವನ್ನು ದೊರಕಿಸಿಕೊಡುವಲ್ಲಿ ಶ್ರಮಿಸಲಾಗುತ್ತಿದೆ. ಇದರಿಂದ ವರ್ಷದಿಂದ ವರ್ಷಕ್ಕೆ ಶಾಲೆಯ ದಾಖಲಾತಿಯು ಖಾಸಗಿ ಶಾಲೆಗಳ ಪೈಪೋಟಿಯ ನಡೆವೆಯೂ ಗಣನೀಯವಾಗಿ ಏರಿಕೆಯಾಗುತ್ತಿದೆ. ಹೀಗಾಗಿ ಶಿಕ್ಷಣ ಇಲಾಖೆಯು ಇಲ್ಲಿನ ಮುಖ್ಯ ಶಿಕ್ಷಕರಾದ ಶ್ರೀ ವಸಂತಕುಮಾರ.ಕೆ.ಸಿ ಇವರಿಗೆ 2017–18 ನೇ ಸಾಲಿನ **"ಜಿಲ್ಲಾ ಅತ್ಯುತ್ತಮ ಶಿಕ್ಷಕ" ಪ್ರ**ಶಸ್ತಿ ನೀಡಿ ಗೌರವಿಸಿದೆ. ಇವರ ಈ ಎಲ್ಲಾ ಕಾರ್ಯಕ್ರಮಗಳಿಗೆ ಶಾಲಾ ಶಿಕ್ಷಕ ವೃಂದದವರು ಮುಖ್ಯ ಶಿಕ್ಷಕರಿಗೆ ಬೆನ್ನೆಲುಬಾಗಿ ನಿಂತು ಸಂಪೂರ್ಣ ಸಹಕಾರ ನೀಡುತ್ತಿದ್ದಾರೆ. ಅಲ್ಲದೆ ಶಾಲೆಯ ಎಸ್.ಡಿ.ಎಮ್.ಸಿ. ಅಧ್ಯಕ್ಷರೂ, ಮಾನ್ಯ ಶಾಸಕರೂ ಆದ ಶ್ರೀ ಬಿ.ವೈ.ರಾಘವೇಂದ್ರರವರು, ಕಾರ್ಯಾಧ್ಯಕ್ಷರಾದ ಪರಶುರಾಮಪ್ಪನವರು, ಎಲ್ಲಾ ಎಸ್.ಡಿ.ಎಮ್.ಸಿ. ಸದಸ್ಯರು, ಸ್ಥಳೀಯ ಪುರಸಭಾ ಸದಸ್ಯರುಗಳು, ಇಲಾಖೆಯ ಎಲ್ಲಾ ಹಂತದ ಅಧಿಕಾರಿಗಳು ಹಾಗೂ ಶಾಲಾ ಪೋಷಕ ವರ್ಗದವರಿಂದ ಸಲಹೆ, ಮಾರ್ಗದರ್ಶನ ಪಡೆದುಕೊಳ್ಳಲಾಗುತ್ತಿದೆ.









